# ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು, ಇವರ ನಡವಳಿಗಳು

ವಿಷಯ: 2018–19ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಜಿ.ಎನ್.ಎಂ/ಬಿಎಸ್ಸಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 205 ಎಂಡಿಎಸ್ 2016, ದಿ: 26.10.2016
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿ: 11.04.2018
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿ: 30.07.2018

********

<u>ಪ್ರಸ್ತಾವನೆ:</u>

ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಜಿ.ಎನ್.ಎಂ/ಬಿಎಸ್ಸಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನುದಾನ ಬಿಡುಗಡೆ ಮಾಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಉಲ್ಲೇಖ (1) ರಲ್ಲಿ ಆದೇಶಿಸಲಾಗಿದೆ. ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ಜಿ.ಎನ್.ಎಂ/ಬಿಎಸ್ಸಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕೋರ್ಸಗಳಲ್ಲಿ ಅಧ್ಯಯನ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ 35,000/-ಗಳ ಅನುದಾವನ್ನು ಪ್ರತಿ ವರ್ಷ (ಕೋರ್ಸ ಮುಗಿರುವ ವರೆಗೆ) ನೀಡಲು ಅನುಷ್ಠಾನಗೊಳಿಸಲು ಆದೇಶಿಸಿದೆ.

ಅದರಂತೆ, ಈಗಾಗಲೇ ಅರ್ಜಿಗಳನ್ನು ಅಹ್ವಾನಿಸಲು ಜಿಲ್ಲೆಗಳಿಗೆ ತಿಳಿಸಲಾಗಿರುತ್ತದೆ. ಅದರಂತೆ, 2018–19ನೇ ಸಾಲಿಗೆ ಮೊದಲನೇ ಹಂತದಲ್ಲಿ 2018–19ನೇ ಸಾಲಿಗೆ, ಉಲ್ಲೇಖ(2) ಮತ್ತು ಉಲ್ಲೇಖ (3) ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಮೊದಲನೇ, ಮತ್ತು ಎರಡನೇ ತ್ರೈಮಾಸಿಕ ಕಂತನ್ನು ಬಿಡುಗಡೆಯಾದ ಅನುದಾನದ ಪೈಕಿ ಅದರಲ್ಲಿ ಮಾನ್ಯ ಮುಖ್ಯಮಂತ್ರಿಯವರ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ರೂ 25000.00 ಲಕ್ಷ (ಇಪತ್ಯೆದು ಸಾವಿರ ಲಕ್ಷ ರೂಗಳು ಮಾತ್ರ)ರೂ ಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದಲ್ಲಿ ಜಿ.ಎನ್.ಎಂ/ಬಿಎಸ್ಸಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ತರಬೇತಿಗಾಗಿ ರೂ. 1849.05 ಲಕ್ಷ (ರೂ ಒಂದು ಸಾವಿರದ ಎಂಟುನೂರು ನಲವತೋಂಬತ್ತು ಲಕ್ಷದ ಐದು ಸಾವಿರ ರೂಗಳು ಮಾತ್ರ) ಗಳನ್ನು ಸಂಬಂಧಪಟ್ಟ ಜಿಲ್ಲೆಯ **<u>ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ</u>** ರವರಿಗೆ ಬಿಡುಗಡೆ ಮಾಡಲು ಈ ಕೆಳಕಂಡಂತೆ ಆದೇಶ

## <u>ಆ ದೇ ಶ</u>

ಸಂ: ಅಸಂನಿ/ಆ/ನರ್ಸಿಂಗ್/ಸಿಆರ್-107/2017-18 ದಿನಾಂಕ: 09.11.2018

ಪ್ರಸ್ತಾವನೆ ವಿವರಗಳಂತೆ, ಮಾನ್ಯ ಮುಖ್ಯಮಂತ್ರಿಯವರ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಸರ್ಕಾರದಿಂದ ಬಿಡುಗಡೆಯಾದ ರೂ 25000.00 ಲಕ್ಷ (ಇಪತ್ಯೆದು ಸಾವಿರ ಲಕ್ಷ ರೂಗಳು ಮಾತ್ರ)ರೂ

ಗಳನ್ನು ಅಲ್ಪಸಂಖ್ಯಾತರ ಸಮುದಾಯದ ಯುವಕ/ ಯುವತಿಯರಿಗೆ ಅಂದರೆ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಜನಾಂಗದ ಜಿ.ಎನ್.ಎಂ/ಬಿಎಸ್ಸಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳಿಗೆ ರೂ.1849.05 ಲಕ್ಷ (ರೂ ಒಂದು ಸಾವಿರದ ಎಂಟುನೂರು ನಲವತ್ತೊಂಬತ್ತು ಲಕ್ಷದ ಐದು ಸಾವಿರ ರೂಗಳು ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧ ಅನ್ವಯ ಆಯಾ ಜಿಲ್ಲೆಗಳ ಮುಂದೆ ನಮೂದಿಸಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** ರವರಿಗೆ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ನಿಬಂಧನೆಗಳು:-

1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 205 ಎಂಡಿಎಸ್ 2016, ದಿ:26.10.2016 ರಂತೆ ನೀಡಲಾಗಿರುವ ಸೂಚನೆಗಳನ್ವಯ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.
2. ಪ್ರತಿ ಅರ್ಹ ವಿದ್ಯಾರ್ಥಿಗೆ ನಿರ್ವಹಣಾ, ಸಮವಸ್ತ್ರ, ಸೈಕ್ಯಾಟ್ರಿಕ್ ಕ್ಲೀನಿಕಲ್ ಹಾಗೂ ಇತರೆ ವೆಚ್ಚಳಿಗೆ ವಾರ್ಷಿಕ (ಲಮ್‌ಸಮ್) ಒಟ್ಟು ರೂ 35,000/-ಗಳನ್ನು ಮಂಜೂರು ಮಾಡುವುದು.
3. ಈ ಯೋಜನೆಯಡಿ ಅನುದಾನ ಪಡೆದ ವಿದ್ಯಾರ್ಥಿಗಳು ಭಾರತ ಸರ್ಕಾರದ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ ಹಾಗೂ ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.
4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಆದ್ಯತೆ ಮೇರೆಗೆ ಈಗಾಗಲೇ ಸ್ವೀಕೃತವಾಗಿರುವ ಅರ್ಜಿಗಳ ಆಧಾರದ ಮೇಲೆ ಅರ್ಹ ನವೀಕರಣ ವಿದ್ಯಾರ್ಥಿಗಳಿಗೆ ಒಂದು ವಾರದೊಳಗಾಗಿ ಅನುದಾನ ಬಿಡುಗಡೆ ಮಾಡುವುದು.
5. ಅನುದಾನವನ್ನು ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆನ್‌ಲೈನ್ ಮೂಲಕ ಜಮಾ ಮಾಡುವುದು.
6. ಜಿಲ್ಲಾ ಕಛೇರಿಯಲ್ಲಿ ಸ್ವೀಕೃತವಾದ ಅರ್ಜಿಗಳಲ್ಲಿ ತಮ್ಮ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಿಗೆ ಸಂಬಂಧಪಟ್ಟ ಅರ್ಜಿಗಳನ್ನು ಕೂಲಂಕುಷವಾಗಿ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಅರ್ಹತೆಯನುಸಾರ. ಆಗಿಂದಾಗೆ ಹೊರಡಿಸಲಾಗಿರುವ ಆದೇಶ, ಸುತ್ತೋಲೆಗಳಲ್ಲಿ ನೀಡಿರುವ ಸೂಚನೆಗಳ/ಷರತ್ತುಗಳಂತೆ ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ಮಂಜೂರು ಮಾಡುವುದು.
7. ಯಾವುದೇ ತಪ್ಪಾದಲ್ಲಿ ಮುಂದೆ ಆಗು ಹೋಗುಗಳಿಗೆ ನೇರವಾಗಿ ನಿಮ್ಮನ್ನೆ ಹೊಣೆಗಾರರನ್ನಾಗಿ ಮಾಡಲಾಗುವುದು.
8. ಸ್ವೀಕೃತವಾದ ಒಟ್ಟು ಅರ್ಜಿಗಳ ಸಂಖ್ಯೆ, ಕ್ರಮ ಬದ್ಧವಾಗಿರುವ ಅರ್ಜಿಗಳ ಸಂಖ್ಯೆ ತಿರಸ್ಕೃತವಾದ ಅರ್ಜಿಗಳ ಸಂಖ್ಯೆಯನ್ನು ಸಮುದಾಯವಾರು, ಲಿಂಗಾವಾರು, ವಿಧಾನ ಸಭಾ ಕ್ಷೇತ್ರಾವಾರು, ತಾಲ್ಲೂಕುವಾರು ಮಾಹಿತಿ ಹಾಗೂ ಎಲ್ಲಾ ಅರ್ಜಿಗಳನ್ನು ಜಿಲ್ಲಾ ಕಛೇರಿಯಲ್ಲಿಯೇ ಕಾಪಾಡುವುದು.
9. ಸದರಿ ಕಾರ್ಯಕ್ರಮದಡಿ ಸಾರ್ವಜನಿಕರು ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿಯನ್ನು ನೀಡಲು ಕೋರಿದ್ದಲ್ಲಿ ನಿಮ್ಮ ಹಂತದಲ್ಲಿಯೇ ಉತ್ತರಿಸುವುದು.

10. ಈ ರೀತಿ ಬಿಡುಗಡೆ ಮಾಡಿರುವ ಮೊತ್ತಕ್ಕೆ ಸಂಬಂಧಿಸಿದಂತೆ ಉಪಯೋಗಿತಾ ಪ್ರಮಾಣ ಪತ್ರವನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಕಳುಹಿಸತಕ್ಕದ್ದು.
11. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು 2018-19ನೇ ಸಾಲಿನ ಆರ್ಥಿಕ ವರ್ಷದಲ್ಲಿಯೇ ಖರ್ಚು ಭರಿಸತಕ್ಕದ್ದು. ಯಾವುದೇ ಕಾರಣಕ್ಕೂ ಸದರಿ ಅನುದಾನವನ್ನು ಮುಂದಿನ ಆರ್ಥಿಕ ವರ್ಷಕ್ಕೆ ನವೀಕರಿಸಲಾಗುವುದಿಲ್ಲ.

ಪ್ರಸ್ತುತ ಬಿಡುಗಡೆ ಮಾಡಿರುವ ಮೊತ್ತವನ್ನು ಲೆಕ್ಕ ಶೀರ್ಷಿಕೆ 4225-03-277-2-10 ಆಬ್ಜೆಕ್ಟ್ ಕೋಡ್ 386 ಮಾನ್ಯ ಮುಖ್ಯ ಮಂತ್ರಿಯವರ ಅಭಿವೃದ್ಧಿ ಯೋಜನೆ ರಾಜ್ಯವಲಯ ಯೋಜನೆಯಡಿ 2018-19 ನೇ ಸಾಲಿಗೆ ಭರಿಸತಕ್ಕದ್ದು.

9/11/18

**(ಅಕ್ರಂ ಪಾಷ, ಐ.ಎ.ಎಸ್)**
**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

ಪ್ರತಿಯನ್ನು:
1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ
4. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗೆ
7. ಲೆಕ್ಕ ಪತ್ರ ಶಾಖೆ.
8. ಕಛೇರಿ ಪ್ರತಿ.
9. ಹೆಚ್ಚುವರಿ ಪ್ರತಿ.